**ಕರ್ನಾಟಕ ಸರ್ಕಾರ**
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಫ್ಲಾಟ್ ನಂ.1-4, ಕೆ.ಎಸ್.ಐ.ಐ.ಡಿ.ಸಿ, ಐ.ಟಿ.ಪಾರ್ಕ್, 5ನೇ ಮಹಡಿ,
ಸೌತ್ ಬ್ಲಾಕ್, ರಾಜಾಜಿನಗರ ಇಂಡಸ್ಟ್ರಿಯಲ್ ಎಸ್ಟೇಟ್ ಬೆಂಗಳೂರು-560010.
ದೂರವಾಣಿ ಸಂಖ್ಯೆ: 080-22372738 ಇ-ಮೇಲ್ : nrega@karnataka.gov.in

No:RDC-EGS/2/2021(E-407800) ದಿನಾಂಕ:15-12-2022

## ಅಧಿಕೃತ ಜ್ಞಾಪನ

**ವಿಷಯ:** ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಗರ್ಭಿಣಿಯರಿಗೆ ಮತ್ತು ಬಾಣಂತಿಯರಿಗೆ ಕೆಲಸದ ಪ್ರಮಾಣದಲ್ಲಿ ರಿಯಾಯತಿ ನೀಡುವ ಕುರಿತು.

*********

ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ವಿಶೇಷ ಚೇತನರು ಮತ್ತು ಹಿರಿಯ ನಾಗರಿಕರಿಗೆ ದಿನ ಒಂದಕ್ಕೆ ನಿಗದಿತ ಕೂಲಿ ಪಡೆಯಲು ನಿರ್ವಹಿಸಬೇಕಾದ ಕೆಲಸದ ಪ್ರಮಾಣದಲ್ಲಿ ಶೇ.50 ರಷ್ಟು ರಿಯಾಯತಿ ಇರುತ್ತದೆ. ಪ್ರಸ್ತುತ ಯೋಜನೆಯಡಿ ಮಹಿಳೆಯರ ಭಾಗವಹಿಸುವಿಕೆ ಪ್ರಮಾಣವು ಶೇ.51 ರಷ್ಟು ಇದ್ದು, ಇದನ್ನು ಶೇ.60 ಕ್ಕೆ ಹೆಚ್ಚಿಸುವ ಗುರಿ ಹೊಂದಲಾಗಿದೆ. ಯೋಜನೆಯ ಕಾಮಗಾರಿಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಭಾಗವಹಿಸುವಂತೆ ಮಾಡಲು ಈಗಾಗಲೇ ಶೇ.60 ಕ್ಕಿಂತ ಹೆಚ್ಚಿನ ಪ್ರಮಾಣದ ಮಹಿಳೆಯರನ್ನು ಹೊಂದಿರುವ ಕಾಮಗಾರಿಗಳಲ್ಲಿ ಮಹಿಳೆಯರು ನಿರ್ವಹಿಸಬೇಕಾದ ಕೆಲಸದ ಪ್ರಮಾಣದಲ್ಲಿ ಶೇ.10 ರಷ್ಟು ರಿಯಾಯತಿ ನೀಡಲಾಗಿದೆ.

ಮಹಾತ್ಮಾಗಾಂಧಿ ನರೇಗಾ ಯೋಜನೆಯ ಕಾಮಗಾರಿಗಳಲ್ಲಿ ಗರ್ಭಿಣಿಯರು ಮತ್ತು ಬಾಣಂತಿಯರು ಸಾಕಷ್ಟು ಸಂಖ್ಯೆಯಲ್ಲಿ ಭಾಗವಹಿಸುತ್ತಿದ್ದು, ಅವರುಗಳ ದೈಹಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಕೆಲಸದ ಪ್ರಮಾಣದಲ್ಲಿ ರಿಯಾಯಿತಿ ನೀಡುವುದು ಅವಶ್ಯಕವಾಗಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಮಹಾತ್ಮಾಗಾಂಧಿ ನರೇಗಾ ಯೋಜನೆಯ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ 06 ತಿಂಗಳು ತುಂಬಿದ ಗರ್ಭಿಣಿಯರಿಗೆ ಮಗುವಿನ ಜನನದವರೆಗೆ ಹಾಗೂ ಬಾಣಂತಿಯರಿಗೆ ಮಗುವಿನ ಜನನ ದಿನಾಂಕದಿಂದ 06 ತಿಂಗಳವರೆಗೆ ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ನಿಗದಿತ ಕೂಲಿ ಪಡೆಯಲು ನಿಗದಿಪಡಿಸಲಾದ ಕೆಲಸದ ಪ್ರಮಾಣದಲ್ಲಿ ಶೇ.50 ರಷ್ಟು ರಿಯಾಯತಿ ನೀಡಿ ಆದೇಶಿಸಿದೆ. ಸದರಿ ರಿಯಾಯಿತಿ ನೀಡಲು ಆರೋಗ್ಯ ಇಲಾಖೆಯು ನೀಡುವ ತಾಯಿ ಕಾರ್ಡನ್ನು ಆಧಾರವಾಗಿ ಪರಿಗಣಿಸಲು ತಿಳಿಸಿದೆ.

15/12/22

ಆಯುಕ್ತರು, ಗ್ರಾಮೀಣಾಭಿವೃದ್ಧಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ರವರಿಗೆ:**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬಹುಮಹಡಿಗಳ ಕಟ್ಟಡ ಬೆಂಗಳೂರು.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು, ಸಾಮಾಜಿಕ ಪರಿಶೋಧನೆ ನಿರ್ದೇಶನಾಲಯ, ಬೆಂಗಳೂರು.
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.

Scanned with CamScanner

5. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
6. ಜಂಟಿ ನಿರ್ದೇಶಕರು(ಆಡಳಿತ/ತಾಂತ್ರಿಕ/ತೋಟಗಾರಿಕೆ/ಕೃಷಿ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
7. ಸಹಾಯಕ ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
8. ಎಲ್ಲಾ ಅನುಷ್ಠಾನ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು. (ಜಿಲ್ಲಾ ಪಂಚಾಯತ್ ಮುಖಾಂತರ)
9. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯತ್ ಮುಖಾಂತರ)
10. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯತ್ ಮುಖಾಂತರ)

Scanned with CamScanner

ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಫ್ಲಾಟ್ ನಂ.1-4, ಕೆ.ಎಸ್.ಐ.ಐ.ಡಿ.ಸಿ, ಐ.ಟಿ.ಪಾರ್ಕ್, 5ನೇ ಮಹಡಿ,
ಸೌತ್ ಬ್ಲಾಕ್, ರಾಜಾಜಿನಗರ ಇಂಡಸ್ಟ್ರಿಯಲ್ ಎಸ್ಟೇಟ್ ಬೆಂಗಳೂರು-560010.
ದೂರವಾಣಿ ಸಂಖ್ಯೆ: 080-22372738 ಇ-ಮೇಲ್ : nrega@karnataka.gov.in

No:RDC-EGS/2/2021(E-407800) ದಿನಾಂಕ:15-12-2022

ರವರಿಗೆ,

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೆ,

**ವಿಷಯ:** ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ಮಹಿಳೆಯರ ಭಾಗವಹಿಸುವಿಕೆಯನ್ನು ಹೆಚ್ಚಿಸಲು ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರಸ್ತುತ ವರ್ಷದಲ್ಲಿ ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ಮಹಿಳೆಯರ ಭಾಗವಹಿಸುವಿಕೆಯ ಪ್ರಮಾಣವನ್ನು ಶೇ 60ಕ್ಕೆ ಹೆಚ್ಚಿಸಲು ಗುರಿ ಹೊಂದಲಾಗಿದೆ. ಈ ಹಿನ್ನೆಲೆಯಲ್ಲಿ ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳಲು ಸೂಚಿಸಿದೆ.

1. ಮಹಾತ್ಮಾಗಾಂಧಿ ನರೇಗಾ ಯೋಜನೆಯ ಹೊರಗುಳಿದಿರುವ ಮಹಿಳೆಯರನ್ನು ಗುರುತಿಸಿ ಆದ್ಯತೆಯ ಮೇರೆಗೆ ಜಾಬ್ ಕಾರ್ಡ್, ಅಕುಶಲ ಕೆಲಸ ಮತ್ತು ವೈಯುಕ್ತಿಕ ಕಾಮಗಾರಿಗಳನ್ನು ಒದಗಿಸುವುದು.
2. ಯೋಜನೆಯ ಕಾಮಗಾರಿಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಭಾಗವಹಿಸುವಂತೆ ಮಾಡಲು ಈಗಾಗಲೇ ಶೇ.60 ಕ್ಕಿಂತ ಹೆಚ್ಚಿನ ಪ್ರಮಾಣದ ಮಹಿಳೆಯರನ್ನು ಹೊಂದಿರುವ ಕಾಮಗಾರಿಗಳಲ್ಲಿ ಮಹಿಳೆಯರು ನಿರ್ವಹಿಸಬೇಕಾದ ಕೆಲಸದ ಪ್ರಮಾಣದಲ್ಲಿ ಶೇ.10 ರಷ್ಟು ರಿಯಾಯತಿ ನೀಡಲಾಗಿದ್ದು, ಇದು ಕಡ್ಡಾಯವಾಗಿ ಪಲನೆಯಾಗುವಂತೆ ನೋಡಿಕೊಳ್ಳುವುದು.
3. ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸುವ ವೈಯುಕ್ತಿಕ ಕಾಮಗಾರಿಗಳನ್ನು ಮಹಿಳೆಯರೆ ನಿರ್ವಹಿಸುವಂತೆ ಉತ್ತೇಜನ ನೀಡುವುದು ಮತ್ತು ಮಹಿಳೆಯರ ಹೆಸರಿನಲ್ಲಿ ಎನ್.ಎಂ.ಆರ್ ಗಳನ್ನು ಸೃಜನೆ ಮಾಡುವುದು.
4. ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸುವ ಸಮುದಾಯ ಕಾಮಗಾರಿಗಳಲ್ಲಿ ಸಾಧ್ಯವಾದಷ್ಟು ಮಟ್ಟಿಗೆ ಕನಿಷ್ಠ ಶೇ.50 ರಷ್ಟು ಮಹಿಳೆಯರು ಭಾಗವಹಿಸುವುದನ್ನು ಮತ್ತು ಎನ್.ಎಂ.ಆರ್ ಗಳಲ್ಲಿ ಕೂಡ ಶೇ.50 ರಷ್ಟು ಮಹಿಳೆಯರು ಒಳಗೊಂಡಿರುವುದನ್ನು ಪರಿಶೀಲಿಸಿ ಖಾತ್ರಿ ಪಡಿಸಿಕೊಳ್ಳುವುದು.

ತಮ್ಮ ವಿಶ್ವಾಸಿ,

ಆಯುಕ್ತರು, ಗ್ರಾಮೀಣಾಭಿವೃದ್ಧಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬಹುಮಹಡಿಗಳ ಕಟ್ಟಡ ಬೆಂಗಳೂರು.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು, ಸಾಮಾಜಿಕ ಪರಿಶೋಧನೆ ನಿರ್ದೇಶನಾಲಯ, ಬೆಂಗಳೂರು.

Scanned with CamScanner

4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
5. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
6. ಜಂಟಿ ನಿರ್ದೇಶಕರು(ಆಡಳಿತ/ತಾಂತ್ರಿಕ/ತೋಟಗಾರಿಕೆ/ಕೃಷಿ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
7. ಸಹಾಯಕ ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
8. ಎಲ್ಲಾ ಅನುಷ್ಠಾನ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು. (ಜಿಲ್ಲಾ ಪಂಚಾಯತ್ ಮುಖಾಂತರ)
9. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯತ್ ಮುಖಾಂತರ)
10. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯತ್ ಮುಖಾಂತರ)

Scanned with CamScanner